ಅ) ಕೊಪ್ಪಳ ಜಿಲ್ಲಾ ಆಸ್ಪತ್ರೆಯ ಕಾಮಗಾರಿಯನ್ನು ಎಂದು ಪ್ರಾರಂಭಿಸಲಾಗುವುದು;

ಆ) ಈ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ, ತೆಗೆದುಕೊಂಡ ಕ್ರಮವೇನು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಕೊಪ್ಪಳ ಜಿಲ್ಲಾ ಆಸ್ಪತ್ರೆಯ ಕಾಮಗಾರಿಯು ಜರ್ಮನಿಯ ಕೆ.ಎಫ್.ಡಬ್ಲ್ಯೂ ಸಂಸ್ಥೆಯ ನೆರವಿನ ಕರ್ನಾಟಕ ದ್ವಿತೀಯ ಹಂತದ ಆಸ್ಪತ್ರೆಗಳ ಅಭಿವೃದ್ಧಿ (ಕೆ.ಎಫ್.ಡಬ್ಲ್ಯೂ) ಯೋಜನೆಯ 2ನೇ ಹಂತದಲ್ಲಿ ಸೇರಿಸಲಾಗಿದೆ. ಈ ಯೋಜನೆಯಡಿ ಗುಲ್ಬರ್ಗಾ ವಿಭಾಗದ 21 ಆಸ್ಪತ್ರೆಗಳ ನವೀಕರಣ ಮತ್ತು ವಿಸ್ತರಣೆ ಕಾಮಗಾರಿಗಳಿಗೆ ಕೆ.ಎಫ್.ಡಬ್ಲ್ಯೂ ಸಂಸ್ಥೆಯೊಂದಿಗೆ ಹಣಕಾಸಿನ ಒಪ್ಪಂದವಾದ ನಂತರ ಪ್ರಾರಂಭಿಸಲಾಗುವುದು.

ಆ) ಹೌದು.

ಇ) ಈ ಆಸ್ಪತ್ರೆಗೆ 10 ವೈದ್ಯರ ಹುದ್ದೆಗಳು ಮಂಜೂರಾಗಿದ್ದು ಅವುಗಳನ್ನು 3 ಹುದ್ದೆಗಳು ಮಾತ್ರ ಖಾಲಿ ಇರುತ್ತದೆ. 12 ಶುಶ್ರೂಷಕಿಯರು, 3 ಪ್ರಯೋಗ ಶಾಲಾ ತಂತ್ರಜ್ಞರು, 1 ಫಾರ್ಮಾಸಿಸ್ಟ್ ಮತ್ತು 1 ಹಿರಿಯ ಆರೋಗ್ಯ ಸಹಾಯಕ ಹುದ್ದೆಗಳು ಖಾಲಿ ಇರುತ್ತವೆ.

ಸೇವಾ ನಿರತ ವೈದ್ಯರುಗಳು ಸ್ನಾತಕೋತ್ತರ ವ್ಯಾಸಂಗವನ್ನು ಪೂರ್ಣಗೊಳಿಸಿ ಬಂದ ನಂತರ ತಜ್ಞರನ್ನು ಖಾಲಿ ಇರುವ ಹುದ್ದೆಗೆ ನೇಮಕ ಮಾಡಲಾಗುವುದು.

ಇತರೆ ಖಾಲಿ ಇರುವ ಹುದ್ದೆಗಳನ್ನು ವಿಶೇಷ ನೇಮಕಾತಿ ಸಮಿತಿಯ ಮುಖಾಂತರ ಭರ್ತಿ ಮಾಡಲಾಗುವುದು. ಈ ಕಾರ್ಯವು ಪ್ರಗತಿಯಲ್ಲಿದೆ. ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಕಾರ್ಯವು ಮುಗಿದಿದ್ದು ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೋಲೀಸ್ ವರದಿ ಬಂದ ಕೂಡಲೇ ನೇಮಕಾತಿ ಆದೇಶ ಹೊರಡಿಸಿ ಭರ್ತಿ ಮಾಡಲಾಗುವುದು.

ಶಿಗ್ಗಾಂವ್ ತಾಲ್ಲೂಕಿನಲ್ಲಿ ಪದವಿ ಪೂರ್ವ ಮಹಾವಿದ್ಯಾಲಯಗಳ ಮಂಜೂರಾತಿ ಕುರಿತು

2935(3212) ಶ್ರೀ ಖಾದ್ರಿ ಎಸ್.ಎಸ್. (ಶಿಗ್ಗಾಂವ್) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪ್ರಸಕ್ತ ವರ್ಷದಲ್ಲಿ ಸರ್ಕಾರ ಮಂಜೂರು ಮಾಡಿದ ಪದವಿ ಪೂರ್ವ ವಿದ್ಯಾಲಯಗಳ ಸಂಖ್ಯೆ ಎಷ್ಟು;

ಆ) ಶಿಗ್ಗಾಂವ ತಾಲ್ಲೂಕು ಕಡಪ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯ ಮಂಜೂರು ಮಾಡಲಾಗುವುದೇ?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಯಾವುದೇ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಿರುವುದಿಲ್ಲ.

ಆ) ಇಲ್ಲ.

ಹಾವೇರಿ ಜಿಲ್ಲೆಯ ಶಿಗ್ಗಾಂವ್ ತಾಲ್ಲೂಕಿನಲ್ಲಿ 2002-03ನೇ ಸಾಲಿನಲ್ಲಿ ಮಂಜೂರಾದ ಪ್ರೌಢ ಶಾಲೆಗಳ ಬಗ್ಗೆ

2936(3238) ಶ್ರೀ ಖಾದ್ರಿ ಎಸ್.ಎಸ್. (ಶಿಗ್ಗಾಂವ್) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?